ದೂರವಾಣಿ ಸಂಖ್ಯೆ: 080-22212343
ಫ್ಯಾಕ್ಸ್ ಸಂಖ್ಯೆ: 080-22278803
ಅಂತರ್ಜಾಲ: https://kptcl.karnataka.gov.in
ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

Corporate Identity Number (CIN): U40109KA1999SGC025521
(ಕಂಪನಿಯ ಅಧಿಕೃತ ಕಚೇರಿ: ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009)

Revision of DA (?) Retired/Pentioners effective from 1/7/2021

ವಿಷಯ: ದಿನಾಂಕ: 01.07.2021 ರಿಂದ ಅನ್ವಯಿಸುವಂತೆ ನಿವೃತ್ತಿ ವೇತನದಾರರಿಗೆ/ಕುಟುಂಬ ನಿವೃತ್ತಿ ವೇತನದಾರರಿಗೆ ತುಟ್ಟಿಭತ್ಯೆಯ ದರಗಳನ್ನು ಪರಿಷ್ಕರಿಸುವ ಬಗ್ಗೆ.

***

**ಓದಲಾಗಿದೆ:-**

1. ಪರಿಷ್ಕೃತ ವೇತನ ಮತ್ತು ಇತ್ಯಾದಿ ವಿಷಯಗಳ ಬಗ್ಗೆ ದಿನಾಂಕ: 02.03.2018 ರಂದು ಕವಿಪ್ರನಿ ನೌಕರರ ಸಂಘ(ನೋಂ.ಸಂ.659) ಮತ್ತು ನಿಗಮದ ಆಡಳಿತ ವರ್ಗದ ನಡುವೆ ಆದ ಒಪ್ಪಂದ.
2. ದಿನಾಂಕ: 01.04.2017 ರಿಂದ ಅನ್ವಯವಾಗುವಂತೆ ನಿವೃತ್ತಿ ವೇತನದಾರರಿಗೆ/ಕುಟುಂಬ ನಿವೃತ್ತಿ ವೇತನದಾರರಿಗೆ ಪಿಂಚಣಿಯನ್ನು ಪರಿಷ್ಕರಣೆ ಮಾಡಿ ಹೊರಡಿಸಿರುವ ನಿಗಮದ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/69518/2017-18 ದಿನಾಂಕ: 09.03.2018.
3. ದಿನಾಂಕ: 01.07.2017 ರಿಂದ ಅನ್ವಯವಾಗುವಂತೆ ಮಂಜೂರು ಮಾಡಲಾಗಿರುವ ಶೇಕಡ 45.25 ರಷ್ಟು ತುಟ್ಟಿಭತ್ಯೆಯನ್ನು 'ಡಿಯರ್‌ನೆಸ್ ಪೇ' ಎಂದು ಪರಿಗಣಿಸಿ ಹೊರಡಿಸಿರುವ ನಿಗಮದ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/3610/2003-04 ದಿನಾಂಕ: 21.06.2018.
4. ದಿನಾಂಕ: 01.07.2017 ರಿಂದ ಮಂಜೂರು ಮಾಡಲಾಗಿರುವ ಶೇಕಡ 45.25 ತುಟ್ಟಿಭತ್ಯೆಯನ್ನು ಮೂಲ ಪಿಂಚಣಿ/ ಕುಟುಂಬ ಪಿಂಚಣಿಗೆ ವಿಲೀನಗೊಳಿಸಿ ಹಾಗೂ ದಿನಾಂಕ: 01.07.2017 ರ ನಂತರ ನಿವೃತ್ತರಾಗುವ ನೌಕರರಿಗೆ ಪಿಂಚಣಿಯನ್ನು ಮಂಜೂರು ಮಾಡುವಾಗ ಶೇಕಡ 45.25 ತುಟ್ಟಿಭತ್ಯೆಯನ್ನು ವೇತನದ ಭಾಗವೆಂದು ಪರಿಗಣಿಸುವಂತೆ ಹೊರಡಿಸಿರುವ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/69518/2017-18 ದಿನಾಂಕ: 29.06.2018.
5. ದಿನಾಂಕ: 01.07.2019 ರಿಂದ ಅನ್ವಯವಾಗುವಂತೆ ನಿಗಮದ ಪಿಂಚಣಿ/ ಕುಟುಂಬ ಪಿಂಚಣಿದಾರರಿಗೆ ತುಟ್ಟಿಭತ್ಯೆಯನ್ನು ಶೇಕಡ 11.25 ರಷ್ಟು ಮಂಜೂರು ಮಾಡಿ ಹೊರಡಿಸಿರುವ ನಿಗಮದ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/3611/2003-04, ದಿನಾಂಕ: 30.10.2019.
6. ನಿಗಮದ ನೌಕರರಿಗೆ ಮತ್ತು ಪಿಂಚಣಿದಾರರಿಗೆ ಜೂನ್-2021 ರ ಅವಧಿಯವರೆಗೆ ಪಾವತಿ ಮಾಡಬೇಕಾಗುವ ತುಟ್ಟಿಭತ್ಯೆಯ ಹೆಚ್ಚುವರಿ ಕಂತುಗಳನ್ನು ಸ್ಥಗಿತಗೊಳಿಸಿ ಹೊರಡಿಸಿರುವ ನಿಗಮದ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/3610(3)/2003-01 ದಿನಾಂಕ: 06.05.2020.
7. ದಿನಾಂಕ: 01.07.2021 ರಿಂದ ಜಾರಿಗೆ ಬರುವಂತೆ ರಾಜ್ಯ ಸರ್ಕಾರದ ನಿವೃತ್ತಿ ವೇತನದಾರರಿಗೆ/ಕುಟುಂಬ ನಿವೃತ್ತಿ ವೇತನದಾರರಿಗೆ ಶೇಕಡ 11.25 ರಿಂದ ಶೇಕಡ 21.50 ತುಟ್ಟಿಭತ್ಯೆಯ ದರವನ್ನು ಪರಿಷ್ಕರಣೆ ಮಾಡಿ ಹೊರಡಿಸಿರುವ ಸರ್ಕಾರದ ಆದೇಶ ಸಂಖ್ಯೆ: ಆಇ 18 ಎಸ್‌ಆರ್‌ಪಿ 2021 ದಿನಾಂಕ: 26.07.2021.
8. ನಿಗಮ ಕಾರ್ಯಾಲಯದ ದಿನಾಂಕ: 30.07.2021 ರ ಟಿಪ್ಪಣಿ.

**ಆದೇಶ ಸಂಖ್ಯೆ; ಕವಿಪ್ರನಿನಿ/ಬಿ16/3611/2003-04, ಬೆಂಗಳೂರು, ದಿನಾಂಕ: 31 JUL 2021**

1. ನಿಗಮದಿಂದ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನವನ್ನು ಪಡೆಯುತ್ತಿರುವ ಎಲ್ಲಾ ನಿವೃತ್ತಿ ವೇತನದಾರರಿಗೆ/ಕುಟುಂಬ ನಿವೃತ್ತಿ ವೇತನದಾರರಿಗೆ ಮೂಲ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನದ ಶೇ.11.25 ರಷ್ಟಿರುವ ತುಟ್ಟಿಭತ್ಯೆಯ ದರವನ್ನು ಶೇ.21.50 ಕ್ಕೆ ದಿನಾಂಕ: 01.07.2021 ರಿಂದ ಜಾರಿಗೆ ಬರುವಂತೆ ಹೆಚ್ಚಿಸಿ ಮಂಜೂರು ಮಾಡಲಾಗಿದೆ.

2. ಪರಿಷ್ಕರಿಸಿದ ದರದಲ್ಲಿ ತುಟ್ಟಿಭತ್ಯೆಯನ್ನು ಜುಲೈ-2021 ರಿಂದ ಮುಂದಕ್ಕೆ ಮತ್ತು ಮರು ಆದೇಶ ಹೊರಡಿಸುವವರೆಗೆ ನಗದಾಗಿ ಪಾವತಿ ಮಾಡುವುದು.

3. ಈ ಆದೇಶದಿಂದಾಗಿ ಪಾವತಿಸಬೇಕಾದ ತುಟ್ಟಿಭತ್ಯೆಯ ಮೊತ್ತದಲ್ಲಿ ಐವತ್ತು ಪೈಸೆ ಹಾಗೂ ಅದಕ್ಕಿಂತ ಹೆಚ್ಚಿನ ಭಿನ್ನಾಂಕಗಳನ್ನು ಮುಂದಿನ ರೂಪಾಯಿಗೆ ಪೂರ್ಣಗೊಳಿಸತಕ್ಕದ್ದು ಮತ್ತು ಐವತ್ತು ಪೈಸೆಗಿಂತ ಕಡಿಮೆ ಇರುವ ಭಿನ್ನಾಂಕಗಳನ್ನು ಕಡೆಗಣಿಸತಕ್ಕದ್ದು.

31/7

ನಿರ್ದೇಶಕರು
(ಆಡಳಿತ ಮತ್ತು ಮಾನವ ಸಂಪನ್ಮೂಲ)

**ಮೆಮೋ**

ಕ್ರಮಾಂಕ:ಪ್ರವ್ಯ(ಆ ಮತ್ತು ಮಾ.ಸಂ)/ಉಪ್ರವ್ಯ/ಸಪ್ರವ್ಯ/ವ್ಯ/ಹಿಸ-2/21-22/ 698-691 ದಿನಾಂಕ: 18 AUG 2021

ನಿಗಮದಿಂದ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನವನ್ನು ಪಡೆಯುತ್ತಿರುವ ಎಲ್ಲಾ ನಿವೃತ್ತಿ ವೇತನದಾರರಿಗೆ/ಕುಟುಂಬ ನಿವೃತ್ತಿ ವೇತನದಾರರಿಗೆ ಮೂಲ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನದ ಶೇ.11.25ರಷ್ಟಿರುವ ತುಟ್ಟಿಭತ್ಯೆಯ ದರವನ್ನು ಶೇ.21.50ಕ್ಕೆ ದಿನಾಂಕ:01.07.2021ರಿಂದ ಜಾರಿಗೆ ಬರುವಂತೆ ಹೆಚ್ಚಿಸಿ ನಿರ್ದೇಶಕರು(ಆ ಮತ್ತು ಮಾಸಂ), ಕವಿಪ್ರನಿನಿ, ಬೆಂಗಳೂರುರವರು ಹೊರಡಿಸಿರುವ ಆದೇಶ ಪತ್ರ ಸಂಖ್ಯೆ:ಕವಿಪ್ರನಿನಿ/ ಬಿ16/3611/2003-04 ದಿನಾಂಕ:31.07.2021ರ ಆದೇಶವನ್ನು ಚಾವಿಸನಿನಿಯಲ್ಲಿ ಯಥಾವತ್ತಾಗಿ ಅಳವಡಿಸಿಕೊಳ್ಳಲು ಆದೇಶಿಸಲಾಗಿದೆ.

ಪ್ರಧಾನ ವ್ಯವಸ್ಥಾಪಕರು(ಆ ಮತ್ತು ಮಾ.ಸಂ)
ಚಾ.ವಿ.ಸ.ನಿ.ನಿ., ಮೈಸೂರು.

**ಪ್ರತಿಗಳು:**

- ಮುಖ್ಯ ಆರ್ಥಿಕ ಅಧಿಕಾರಿ, ಚಾವಿಸನಿನಿ, ಮೈಸೂರುರವರ ಅವಗಾಹನೆಗಾಗಿ.
- ಮುಖ್ಯ ಪ್ರಧಾನ ವ್ಯವಸ್ಥಾಪಕರು(ಆಂ.ಪ), ನಿಗಮ ಕಛೇರಿ, ಮೈಸೂರು.
- ಮುಖ್ಯ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ವಲಯ, ಚಾವಿಸನಿನಿ, ಮೈಸೂರು/ಹಾಸನ.
- ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ವೃತ್ತ, ಚಾವಿಸನಿನಿ.
- ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ)/ಲೆಕ್ಕಾಧಿಕಾರಿ, ಕಾರ್ಯ ಮತ್ತು ಪಾಲನಾ ವಿಭಾಗ, ಚಾವಿಸನಿನಿ ರವರ ಮಾಹಿತಿಗಾಗಿ ಹಾಗು ಅಗತ್ಯ ಕ್ರಮಕ್ಕಾಗಿ.
- ಉಪ ಪ್ರಧಾನ ವ್ಯವಸ್ಥಾಪಕರು(ಎಂ.ಐ.ಎಸ್), ನಿಗಮ ಕಛೇರಿ, ಮೈಸೂರುರವರಿಗೆ ನಿಗಮದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
- ಆ.ಕಾ-ವ್ಯ.ನಿ/ನಿ(ತಾಂ)/ಮು.ಆ.ಅ
- ಸ-2(ಆ ಮತ್ತು ಮಾ.ಸಂ)/ಪ್ರ.ಕ.